## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬಳ್ಳಾರಿ ಜಿಲ್ಲೆ (ಪ್ರಸ್ತುತ ವಿಜಯನಗರ ಜಿಲ್ಲೆ) ಹರಪನಹಳ್ಳಿ ತಾಲ್ಲೂಕಿನ ಕಣವಿ (ಪ್ರಸ್ತುತ ಕಣಿವಿ ಹಳ್ಳಿ) ಮತ್ತು ಇತರೆ 21 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಪುನಃಶ್ಚೇತನ (Augmentation) ಕಾಮಗಾರಿಯ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು

**ಓದಲಾಗಿದೆ:** ಮುಖ್ಯ ಅಭಿಯಂತರರು, ಗ್ರಾ.ಕು.ನೀ&ನೈ. ಇಲಾಖೆ, ಇವರ ಕಡತ ಸಂ:ಗ್ರಾಕುನೀ&ನೈಇ/418/ಮುಇಂ/ತಾಂತ್ರಿಕ/2021

---

**ಪೀಠಿಕೆ:**

ಮೇಲೆ ಓದಲಾದ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಬೆಂಗಳೂರುರವರ ಕಡತದಲ್ಲಿ ಬಳ್ಳಾರಿ ಜಿಲ್ಲೆ (ಪ್ರಸ್ತುತ ವಿಜಯನಗರ ಜಿಲ್ಲೆ), ಹರಪನಹಳ್ಳಿ ತಾಲ್ಲೂಕಿನ ಕಣವಿ (ಪ್ರಸ್ತುತ ಕಣಿವಿ ಹಳ್ಳಿ) ಮತ್ತು ಇತರೆ 21 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಪುನಃಶ್ಚೇತನ (Augmentation) ಕಾಮಗಾರಿಯ **ರೂ.648.60ಲಕ್ಷಗಳ** ಅಂದಾಜಿಗೆ ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ದಿನಾಂಕ:03.08.2020ರ SLSSC ಸಭೆಯಲ್ಲಿ 2020-21ನೇ ಸಾಲಿನ JJM ಕಾರ್ಯಕ್ರಮದ ಅಡಿಯಲ್ಲಿ ಕ್ರಿಯಾ ಯೋಜನೆಗೆ ಅನುಮೋದನೆ ದೊರಕಿರುತ್ತದೆ (SLSSC ಸಭೆಯಲ್ಲಿ ಮಂಡಿಸಲಾಗಿದ್ದ JJM ಕ್ರಿಯಾ ಯೋಜನೆಯಲ್ಲಿ ಸದರಿ ಕಾಮಗಾರಿಯನ್ನು ಪರಿಗಣಿಸಲಾಗಿರುತ್ತದೆ).

ಚಾಲ್ತಿ ಪಾರದರ್ಶಕ ನೀತಿಯನ್ವಯ ನಿಯಮಾನುಸಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ಬಳ್ಳಾರಿ/ವಿಜಯನಗರ** ಹಾಗೂ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರುರವರು ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲು ಅನುವಾಗುವಂತೆ ಉದ್ದೇಶಿತ ಯೋಜನೆಯ ಪುನಃಶ್ಚೇತನ (Augmentation) ಕಾಮಗಾರಿಯ ಅಂದಾಜು ಮೊತ್ತ **ರೂ.648.60ಲಕ್ಷಗಳಿಗೆ** ಜಲ ಜೀವನ ಮಿಷನ್ (JJM) ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ನಿರ್ಧರಿಸಲಾಗಿದೆ. ಆದ್ದರಿಂದ ಈ ಆದೇಶ:-

**ಸರ್ಕಾರದ ಆದೇಶ ಸಂಖ್ಯೆ: ಗ್ರಾಕುನೀ&ನೈಇ/285/ಗ್ರಾನೀಸ(4)2021 ಬೆಂಗಳೂರು, ದಿನಾಂಕ:20.11.2021** 1108

ಪೀಠಿಕೆಯಲ್ಲಿನ ವಾಸ್ತವಾಂಶಗಳನ್ನು ಪರಿಶೀಲಿಸಿ, ಬಳ್ಳಾರಿ ಜಿಲ್ಲೆ (ಪ್ರಸ್ತುತ ವಿಜಯನಗರ ಜಿಲ್ಲೆ), ಹರಪನಹಳ್ಳಿ ತಾಲ್ಲೂಕಿನ ಕಣವಿ (ಪ್ರಸ್ತುತ ಕಣಿವಿಹಳ್ಳಿ) ಮತ್ತು ಇತರೆ 21 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಪುನಃಶ್ಚೇತನ (Augmentation) ಕಾಮಗಾರಿಯ ಒಟ್ಟು ಅಂದಾಜು ಮೊತ್ತ **ರೂ.648.60ಲಕ್ಷ(ಆರು ನೂರ ನಲವತ್ತೆಂಟು ಲಕ್ಷದ ಅರವತ್ತು ಸಾವಿರ ರೂಪಾಯಿಗಳು ಮಾತ್ರ) ಗಳಿಗೆ** ಜಲ ಜೀವನ ಮಿಷನ್ **(JJM)** ಕಾರ್ಯಕ್ರಮದ ಅಡಿಯಲ್ಲಿ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಪ್ರಸ್ತಾಪಿತ ಕಾಮಗಾರಿಗೆ ಸಕ್ಷಮ ಪ್ರಾಧಿಕಾರದಿಂದ ಅವಶ್ಯವಿರುವ ಅನುಮೋದನೆ ಪಡೆದು ನಂತರ ಮುಂದಿನ ಕ್ರಮವಹಿಸಬೇಕು. ಅನುಮೋದನೆ ನೀಡಲಾದ ಅಂದಾಜಿನ ವ್ಯಾಪ್ತಿಯೊಳಗೆ ಕಾಮಗಾರಿಯನ್ನು ಅನುಷ್ಠಾನಗೊಳಿಸತಕ್ಕದ್ದು. ಅಂದಾಜು ಮೊತ್ತದಲ್ಲಿ ಯಾವುದೇ ರೀತಿಯ ಹೆಚ್ಚಳಕ್ಕೆ ಆಸ್ಪದ ನೀಡಬಾರದು.

3. ಈ ಆದೇಶದಡಿ ಅನುಮೋದನೆಗೊಂಡ ಕುಡಿಯುವ ನೀರಿನ ಯೋಜನೆಯ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು ಇವರು ದೃಢೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆ ಮಾಡಲಾಗುವುದು.

4. ಯೋಜನೆಯನ್ನು ಚಾಲ್ತಿ ಪಾರದರ್ಶಕ (KTPP ಕಾಯ್ದೆಯನ್ವಯ) ನೀತಿಯನ್ವಯ ಅನುಷ್ಠಾನಗೊಳಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

20/11/2024

ಉಪ ಕಾರ್ಯದರ್ಶಿ (ಆಡಳಿತ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಬಳ್ಳಾರಿ.**
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಆಯುಕ್ತರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
7. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
8. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
9. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ಬಳ್ಳಾರಿ / ವಿಜಯನಗರ.**
10. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಛೇರಿ, **ಕಲಬುರಗಿ.**
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ, "ಕರ್ನಾಟಕ ವಿಕಾಸ", ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
13. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
14. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ಹರಪನಹಳ್ಳಿ.**
15. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು), ಬಹುಮಹಡಿ ಕಟ್ಟಡ, ಬೆಂಗಳೂರು.
16. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ), ಬೆಂಗಳೂರು.
17. ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು), ಬಹುಮಹಡಿ ಕಟ್ಟಡ ಬೆಂಗಳೂರು.
18. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.